ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE: 6/4/21

[redacted]

# ದೇಶಾದ್ಯಂತ ಮತ್ತೆ ಲಕ್ಷ ದಾಟಿದ ಕರೋನಾ ಪ್ರಕರಣ

## ಈವರೆಗೂ 1,65,101 ಮಂದಿ ಸಾವು

**ದೆಹಲಿ:** ದೇಶಾದ್ಯಂತ ಮತ್ತೆ ನಿತ್ಯದ ಕರೋನಾ ಪ್ರಕರಣಗಳ ಸಂಖ್ಯೆ ಒಂದು ಲಕ್ಷ ದಾಟಿದೆ. ಸೋಮವಾರ ಒಂದೇ ದಿನ 1,03,558 ಹೊಸ ಪ್ರಕರಣಗಳು ದಾಖಲಾಗಿದ್ದು, ಸೋಂಕಿನಿಂದ 478 ಮಂದಿ ಮೃತಪಟ್ಟಿದ್ದಾರೆ. ಕಳೆದ ವರ್ಷ ಕರೋನಾ ಆರ್ಭಟ ಆರಂಭವಾದ ನಂತರ ಇದೇ ಮೊದಲ ಬಾರಿಗೆ ಹೆಚ್ಚಿನ ಸಂಖ್ಯೆಯಲ್ಲಿ ದಾಖಲಾದ ನಿತ್ಯದ ಕರೋನಾ ಪ್ರಕರಣ ಇದಾಗಿದೆ. ಕಳೆದ ಸೆಪ್ಟೆಂಬರ್ 16ರಂದು 97,894 ಪ್ರಕರಣಗಳು ದಾಖಲಾಗಿತ್ತು. ದೇಶದಲ್ಲಿನ ಒಟ್ಟು ಪ್ರಕರಣಗಳ ಸಂಖ್ಯೆ 1,25,89,067ಕ್ಕೆ ಏರಿಕೆಯಾಗಿದೆ. ಸದ್ಯಕ್ಕೆ ದೇಶದಲ್ಲಿನ ಸಕ್ರಿಯ ಪ್ರಕರಣಗಳ ಸಂಖ್ಯೆ 7,41,830 ಆಗಿದೆ. ಸೋಮವಾರ ಒಂದೇ ದಿನ 478 ಮಂದಿ ಮೃತಪಟ್ಟಿದ್ದು, ಈವರೆಗೂ ಒಟ್ಟು 1,65,101 ಮಂದಿ ಸೋಂಕಿನಿಂದ ಮೃತಪಟ್ಟಿದ್ದಾರೆ.



ಕರೋನಾ 2ನೇ ಅಲೆ

**ರಾಜ್ಯದಲ್ಲಿ 5 ಸಾವಿರ ಗಡಿ ದಾಟಿದ ಕರೋನಾ:** ರಾಜ್ಯದಲ್ಲಿ ಸೋಮವಾರ ಹೊಸದಾಗಿ 5,279 ಜನರಿಗೆ ಕೋವಿಡ್-19 ಸೋಂಕು ತಗುಲಿರುವುದು ಪತ್ತೆಯಾಗಿದ್ದು, 32 ಮಂದಿ ಮೃತಪಟ್ಟಿದ್ದಾರೆ. ಈ ಮೂಲಕ ಒಟ್ಟಾರೆ ಸೋಂಕಿತರ ಸಂಖ್ಯೆ 10,20,434ಕ್ಕೆ ಏರಿಕೆಯಾಗಿದೆ. ಒಟ್ಟಾರೆ 12,657 ಜನರು ಮೃತಪಟ್ಟಿದ್ದಾರೆ.

- **ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಗುಣಮುಖರಾಗಿ ಆಸ್ಪತ್ರೆಯಿಂದ ಬಿಡುಗಡೆ**
- **ವಿಧಾನಪರಿಷತ್ ಮುಖ್ಯಸಚೇತಕ ಮಹಾಂತೇಶ ಕವಟಗಿಮಠ ಅವರಿಗೆ ಕೋವಿಡ್-19 ದೃಢಪಟ್ಟಿದೆ**
- **ಮುಂಬೈನಲ್ಲಿ ಏಪ್ರಿಲ್ 30ರವರೆಗೆ ಸಿಆರ್‌ಪಿಸಿ ಸೆಕ್ಷನ್ 144ರ ಅಡಿ ನಿಷೇಧಾಜ್ಞೆ ಜಾರಿ**
- **ಬೆಂಗಳೂರಿನಲ್ಲಿ 13 ವೈದ್ಯಕೀಯ ಸಿಬ್ಬಂದಿಗಳಿಗೆ ಕರೋನಾ ಸೋಂಕು**

**ಇನ್ನೆರಡು ತಿಂಗಳು ಕರೋನಾರ್ಭಟ:** ರಾಜ್ಯದಲ್ಲಿ ಇನ್ನೆರಡು ತಿಂಗಳು ಕರೋನಾ ಅಟ್ಟಹಾಸ ಜೋರಾಗಿರಲಿದೆ. ಮೇ ಅಂತ್ಯದವರೆಗೆ ಕೋವಿಡ್ ಸ್ಫೋಟವಾಗಲಿದ್ದು, ಜನರು ಗಂಭೀರವಾಗಿ ತೆಗೆದುಕೊಳ್ಳಬೇಕು ಎಂದು ಸಚಿವ ಡಾ.ಕೆ.ಸುಧಾಕರ್ ಮನವಿ ಮಾಡಿದರು.

ಕೇಂದ್ರದಿಂದ 15 ಲಕ್ಷಕ್ಕೂ ಹೆಚ್ಚು ಲಸಿಕೆ ಕಳಿಸಿದ್ದಾರೆ. 10 ಲಕ್ಷ ಬೆಂಗಳೂರಿಗೆ, 5 ಲಕ್ಷ ಬೆಳಗಾವಿಗೆ ಕಳಿಸಿದ್ದಾರೆ. ಬೆಂಗಳೂರಿನಲ್ಲಿ ಸ್ವಲ್ಪ ಸೋಂಕು ಕಡಿಮೆಯಾಗಿದೆ. ನಿನ್ನೆ ಪ್ರಧಾನಿ ಕೂಡ ಎಂಟು ರಾಜ್ಯಗಳ ಜತೆ ಸಮಾಲೋಚನೆ ಮಾಡಿದ್ದು, ಆಯಾ ರಾಜ್ಯ ಸರಕಾರಗಳಿಗೆ ನಿರ್ಧಾರ ತೆಗೆದುಕೊಳ್ಳುವ ಜವಾಬ್ದಾರಿ ನೀಡಿದ್ದಾರೆ. ಸೋಂಕು ಜಾಸ್ತಿಯಾದರೆ ಕಠಿಣ ಕ್ರಮ ತೆಗೆದುಕೊಳ್ಳಬೇಕು ಅಂತ ಸೂಚಿಸಿದ್ದಾರೆ.